ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

691 (841) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು;

(ಆ) ನ್ಯಾಯಬೆಲೆ ಅಂಗಡಿಗಳ ಬಾಡಿಗೆಯನ್ನು ಸರ್ಕಾರವೇ ಭರಿಸುತ್ತದೆಯೇ; ಹಾಗಿದ್ದಲ್ಲಿ, ಭರಿಸುವ ಶುಲ್ಕವೆಷ್ಟು;

(ಇ) ಗ್ರಾಮೀಣ ಪ್ರದೇಶದಲ್ಲಿ ನ್ಯಾಯಬೆಲೆ ಅಂಗಡಿಯನ್ನು ಸರ್ಕಾರದ ಅನುಮತಿ ಪಡೆದು ನಡೆಸಬಹುದೇ, ಹಾಗಿದ್ದಲ್ಲಿ, ಅದಕ್ಕೆ ಇರುವ ನಿಯಮಗಳು ಹಾಗೂ ಮಾನದಂಡಗಳೇನು;

(ಈ) ಎಷ್ಟು ರೇಷನ್ ಕಾರ್ಡ್‌ಗಳಿಗೆ ಅಥವಾ ಎಷ್ಟು ಕುಟುಂಬಗಳಿಗೆ ಒಂದು ನ್ಯಾಯಬೆಲೆ ಅಂಗಡಿಯನ್ನು ಸ್ಥಾಪಿಸಲಾಗುತ್ತದೆ?